ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ನಂ: 1234, 5ನೇ ಮಹಡಿ, ಕೆ.ಎಸ್.ಎಸ್.ಐ.ಡಿ.ಸಿ, ಐಟಿಪಾರ್ಕ್, ಸೌತ್ಬ್ಲಾಕ್
ರಾಜಾಜಿನಗರ, ಇಂಡಸ್ಟ್ರೀಯಲ್ ಎಸ್ಟೇಟ್, ಬೆಂಗಳೂರು-560010
ದೂ. 080-22372738 e-mail: karnregs.office@gmail.com

**ಸಂಖ್ಯೆ**: RDC-EGS/6/2022 (E-672927) **ದಿನಾಂಕ**: 01.12.2022

**ಇವರಿಗೆ:**
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.

**ಮಾನ್ಯರೇ,**

**ವಿಷಯ:** ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನಗೊಳಿಸುವ ವೈಯಕ್ತಿಕ ಕಾಮಗಾರಿಗಳನ್ನು ಫಲಾನುಭವಿಗಳು ಹಣ ಪಾವತಿಯಾದ ನಂತರ ಅನ್ಯ ಉದ್ದೇಶಕ್ಕೆ ಬಳಸಿಕೊಳ್ಳುತ್ತಿರುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 07.09.2022ರಂದು ನಡೆದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನಾ ನಿಧಿ ಸಂಘದ ಕಾರ್ಯಕಾರಿ ಸಮಿತಿ ಸಭೆಯ ನಡವಳಿಯ ಕ್ರಮ ಸಂಖ್ಯೆ (3)ರ ರೀತ್ಯಾ.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನಗೊಳಿಸುವ ವೈಯಕ್ತಿಕ ಕಾಮಗಾರಿಗಳನ್ನು ಫಲಾನುಭವಿಗಳು ಹಣ ಪಾವತಿಯಾದ ನಂತರ ಅನ್ಯ ಉದ್ದೇಶಕ್ಕಾಗಿ ಬಳಸಿಕೊಳ್ಳುತ್ತಿರುವುದು ಹಾಗೂ ಕೃಷಿಹೊಂಡಗಳನ್ನು ಮುಚ್ಚಿ ಹಾಕುತ್ತಿರುವ ಬಗ್ಗೆ ಹಲವಾರು ಪ್ರಕರಣಗಳು ಸಾಮಾಜಿಕ ಪರಿಶೋಧನೆಯಲ್ಲಿ ವರದಿಯಾಗಿರುತ್ತವೆ. ಆದ್ದರಿಂದ, ಯೋಜನೆಯಡಿ ಪಡೆದ ವೈಯಕ್ತಿಕ ಸೌಲಭ್ಯಗಳನ್ನು ಕನಿಷ್ಠ 05 ವರ್ಷಗಳವರೆಗೆ ಅನ್ಯ ಉದ್ದೇಶಕ್ಕೆ ಬಳಸದಂತೆ ಅಥವಾ ನಾಶ ಪಡಿಸದಂತೆ ವೈಯಕ್ತಿಕ ಕಾಮಗಾರಿಗಳ ಫಲಾನುಭವಿಗಳಿಂದ ಮುಚ್ಚಳಿಕೆ ಪತ್ರ ಪಡೆಯುವ ಪದ್ಧತಿಯನ್ನು ಜಾರಿಗೊಳಿಸುವಂತೆ ಉಲ್ಲೇಖಿತ ಸಭೆಯಲ್ಲಿ ಮಾನ್ಯರು ಸೂಚಿಸಿರುತ್ತಾರೆ. ಸೂಚನೆಯಂತೆ, ವೈಯಕ್ತಿಕ ಕಾಮಗಾರಿಗಳ ಫಲಾನುಭವಿಗಳಿಂದ ಕಡ್ಡಾಯವಾಗಿ ಮುಚ್ಚಳಿಕೆ ಪತ್ರ ಪಡೆದ ನಂತರವೇ ಕಾಮಗಾರಿಗಳನ್ನು ಅನುಷ್ಠಾನಿಸಲು ತಿಳಿಸಿದೆ.

1/12/22

**ಆಯುಕ್ತರು ಗ್ರಾಮೀಣಾಭಿವೃದ್ಧಿ**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**<u>ಪ್ರತಿಯನ್ನು ಮಾಹಿತಿಗಾಗಿ ಸಲ್ಲಿಸಿದೆ:</u>**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ.
2. ಆಯುಕ್ತರು ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರ ಆಪ್ತ ಶಾಖೆಗೆ.
3. ಮುಖ್ಯ ಅಭಿಯಂತರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
4. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
5. ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
6. ಜಂಟಿ ನಿರ್ದೇಶಕರು (ಆಡಳಿತ/ತಾಂತ್ರಿಕ/ತೋಟಗಾರಿಕೆ/ಕೃಷಿ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
7. ಸಹಾಯಕ ನಿರ್ದೇಶಕರು (ಆಡಳಿತ, 1, 2,3 ಮತ್ತು 4), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
8. ಹೆಚ್ಚಿನ ಪ್ರತಿಗಳು.